KARNATAKA LEGISLATIVE ASSEMBLY RESEARCH AND REFERENCE BRANCH
PAPER CLIPPINGS
DEPARTMENT / SUBJECT:
NAME OF THE NEWS PAPER:
DATE: 10/2/2020

# ರೈತ ಸಾಲ ಬಡ್ಡಿ ಮನ್ನಾ

## ■ ರಾಜ್ಯ ಸರ್ಕಾರದ ಬೊಕ್ಕಸಕ್ಕೆ 400 ಕೋಟಿ ರೂ. ಹೊರೆ
## ■ ಮಾರ್ಚ್ ಒಳಗೆ ಬಾಕಿ ಪಾವತಿಸುವವರಿಗೆ ರಿಯಾಯಿತಿ

ಹುಬ್ಬಳ್ಳಿ: ಪಿಎಲ್‌ಡಿ, ಡಿಸಿಸಿ ಬ್ಯಾಂಕ್ ಹಾಗೂ ಸಹಕಾರಿ ಸಂಘಗಳಲ್ಲಿನ ರೈತರ ಸಾಲದ ಮೇಲಿನ ಬಡ್ಡಿ ಹಾಗೂ ಸುಸ್ತಿ ಬಡ್ಡಿಯನ್ನು ಮನ್ನಾ ಮಾಡಲಾಗುವುದು ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಪ್ರಕಟಿಸಿದರು.

ಹುಬ್ಬಳ್ಳಿಯ ವಿಮಾನ ನಿಲ್ದಾಣದಲ್ಲಿ ರವಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವು ವರ್ಷಗಳಿಂದ ರೈತರು ಸಾಲದ ಒತ್ತಡದಲ್ಲಿ ಸಿಲುಕಿದ್ದು ಬಡ್ಡಿ ಹಾಗೂ ಸುಸ್ತಿ ಬಡ್ಡಿಯನ್ನು ಕಟ್ಟಲಾಗದೇ ತೊಂದರೆಯಲ್ಲಿದ್ದಾರೆ. ಇದನ್ನು ಮನಗಂಡು ರೈತರಿಗೆ ನೆರವಾಗುವ ನಿಟ್ಟಿನಲ್ಲಿ ಬಡ್ಡಿ ಮನ್ನಾ ಮಾಡಲಾಗುತ್ತಿದೆ. ಇದರಿಂದ ಸರ್ಕಾರಕ್ಕೆ 400 ಕೋಟಿ ರೂಪಾಯಿಗಳ ಭಾರ ಬೀಳಲಿದೆ. ಮಾರ್ಚ್ ಅಂತ್ಯದ ಒಳಗಾಗಿ ಸಾಲ ಮರುಪಾವತಿಸುವ ರೈತರಿಗೆ ರಿಯಾಯಿತಿ ಸಹ ನೀಡಲು ಯೋಚಿಸಲಾಗುತ್ತಿದೆ ಎಂದರು. ಮಾರ್ಚ್ 5 ರಂದು ರಾಜ್ಯ ಬಜೆಟ್ ಮಂಡಿಸುವ ಸಲುವಾಗಿ ಸಿದ್ಧತೆಗಳು ಆರಂಭವಾಗಿವೆ. ಈ ಸಲದ ಬಜೆಟ್



ರೈತ ಸ್ನೇಹಿಯಾಗಿರಲಿದೆ. ರಾಜ್ಯದ ಅಭಿವೃದ್ಧಿ ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಎಂದು ಬಿಎಸ್‌ವೈ ಹೇಳಿದರು.

### ಹೊಸ ಜಿಲ್ಲೆ ರಚನೆ ಇಲ್ಲ

ರಾಜ್ಯ ಸಚಿವ ಸಂಪುಟ ವಿಸ್ತರಣೆಯಾಗಿದ್ದು, ನೂತನ ಸಚಿವರಿಗೆ ಯಾವೆಲ್ಲಾ ಖಾತೆ ನೀಡಬೇಕೆಂದು ಈಗಾಗಲೇ ಪಟ್ಟಿ ಮಾಡಿಕೊಳ್ಳಲಾಗಿದೆ. ಫೆ. 10ರಂದು ಖಾತೆ ಹಂಚಿಕೆ ಮಾಡಲಾಗುವುದು ಎಂದ ಸಿಎಂ, ಸಚಿವ ಸ್ಥಾನಕ್ಕಿಂತ ವಿಜಯ ನಗರ ಜಿಲ್ಲೆಯಾಗುವುದು ತಮಗೆ ಮುಖ್ಯ ಎಂಬ ಆನಂದ ಸಿಂಗ್ ಹೇಳಿಕೆಗೆ ಪ್ರತಿಕ್ರಿಯಿಸಿ ಸದ್ಯ ಹೊಸ ಜಿಲ್ಲೆ ರಚನೆ ವಿಚಾರ ಸರ್ಕಾರದ ಮುಂದಿಲ್ಲ ಎಂದರು.

### ಮಹದಾಯಿ ಯೋಜನೆಗೆ ಹಣ

ಮಹದಾಯಿ ವಿಚಾರ ಸುಪ್ರೀಂಕೋರ್ಟ್‌ನಲ್ಲಿದ್ದು, ರಾಜ್ಯದ ಅಡ್ವೊಕೇಟ್ ಜನರಲ್ ಅವರಿಗೆ ಮೇಲ್ಮನವಿ ಸಲ್ಲಿಸಲು ನಿರ್ದೇಶನ ನೀಡಿದ್ದೇನೆ. ಮಹದಾಯಿ ಸಮಸ್ಯೆಯನ್ನು ಬಗೆಹರಿಸಲಾಗುವುದು. ರಾಜ್ಯ ಬಜೆಟ್‌ನಲ್ಲಿಯೂ ಮಹದಾಯಿ ಯೋಜನೆಗೆ ಹಣ ಮೀಸಲಿರಿಸಲಾಗುವುದು ಎಂದು ಸಿಎಂ ವಿವರಿಸಿದರು.